**Bangalore**
**Regional News**
**13.10.2026: 18.40hrs**
**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**ಮುಖ್ಯಾಂಶಗಳು:**

1. ಕಬ್ಬು ಬೆಳೆಗಾರರಿಗೆ ಕೇಂದ್ರ ಸರ್ಕಾರದಿಂದ ಶೀಘ್ರವೇ ಸಿಹಿ ಸುದ್ದಿ - ಸಚಿವ ಪ್ರಲ್ಹಾದ್ ಜೋಶಿ ಸ್ಪಷ್ಟನೆ
2. ಪ್ರಗತಿಪಥ ಯೋಜನೆಯ ಮೂಲಕ ರಾಜ್ಯದ ೨ ಸಾವಿರದ ೨೪೮ ಕಿಲೋಮೀಟರ್ ಗ್ರಾಮೀಣ ರಸ್ತೆ ಅಭಿವೃದ್ಧಿಗೆ ಸರ್ಕಾರ ನಿರ್ಧಾರ
3. ೨೦೩೦ರ ವೇಳೆಗೆ ವಿಪತ್ತು ನಿರ್ವಹಣೆಯಲ್ಲಿ ರಾಜ್ಯವನ್ನು ದೇಶಕ್ಕೆ ಮಾದರಿಯಾಗಿಸುವ ಗುರಿ- ಉಪಮುಖ್ಯಮಂತ್ರಿ ಡಾ.ಜಿ.ಪರಮೇಶ್ವರ್
4. ಸಮಾಜದ ಕಟ್ಟಕಡೆಯ ವ್ಯಕ್ತಿಗೂ ಸರ್ಕಾರದ ಯೋಜನೆಗಳು ತಲುಪಬೇಕು- ಕೇಂದ್ರ ಸಚಿವ ರಾಮ್‌ದಾಸ್ ಅಠಾವಳೆ
5. ಕಳೆಗಟ್ಟಿದ ನಾಡ ಹಬ್ಬ; ಮಹಿಳಾ ದಸರಾಗೆ ಸಚಿವ ಡಾ.ಯತೀಂದ್ರ ಸಿದ್ದರಾಮಯ್ಯ ಚಾಲನೆ

*********

ಕಬ್ಬು ಬೆಳೆಗಾರರು ಎದುರಿಸುತ್ತಿರುವ ಸಮಸ್ಯೆಗಳನ್ನು ಬಗೆಹರಿಸಲು ಕೇಂದ್ರ ಸರ್ಕಾರ ಶೀಘ್ರದಲ್ಲೇ ಜಂಟಿ ಸಮಿತಿಯೊಂದನ್ನು ರಚಿಸಲಿದೆ ಎಂದು ಕೇಂದ್ರ ಆಹಾರ ಮತ್ತು ಗ್ರಾಹಕ ವ್ಯವಹಾರಗಳ ಸಚಿವ ಪ್ರಲ್ಹಾದ್ ಜೋಶಿ ತಿಳಿಸಿದ್ದಾರೆ. ನವದೆಹಲಿಯಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕರ್ನಾಟಕ ಮತ್ತು ಮಹಾರಾಷ್ಟ್ರದ ರೈತರೊಂದಿಗೆ ನಡೆದ ಸಭೆ ಯಶಸ್ವಿಯಾಗಿದ್ದು, ರೈತರು ರಸ್ತೆ ತಡೆ ನಡೆಸುವ ಅಗತ್ಯವಿಲ್ಲ ಎಂದು ತಿಳಿಸಿದ್ದಾರೆ. ಕೇಂದ್ರ ಸರ್ಕಾರ ಶೀಘ್ರವೇ ಕಬ್ಬು ಬೆಳೆಗಾರರಿಗೆ ಸಿಹಿ ಸುದ್ದಿ ನೀಡಲಿದೆ ಎಂದು ಸ್ಪಷ್ಟಪಡಿಸಿದ್ದಾರೆ. ಕಬ್ಬು ಬೆಳೆಗಾರರು, ಕೃಷಿ ವಿಜ್ಞಾನಿಗಳು ಹಾಗೂ ಕೇಂದ್ರ ಮತ್ತು ರಾಜ್ಯ ಸರ್ಕಾರಗಳ ಪ್ರತಿನಿಧಿಗಳನ್ನೊಳಗೊಂಡ ಜಂಟಿ ಸಮಿತಿ ರಚಿಸಲು ಕೇಂದ್ರ ಸರ್ಕಾರ ನಿರ್ಧರಿಸಿದೆ ಎಂದು ತಿಳಿಸಿದ್ದಾರೆ.

*********

ಕಬ್ಬು ಬೆಳೆಗಾರರಿಗೆ ನ್ಯಾಯಯುತ ಬೆಲೆ ದೊರೆಯುವಂತೆ ಮಾಡುವುದರ ಜೊತೆಗೆ ಕಬ್ಬಿನ ತೂಕ, ರಿಕವರಿ, ಕಟಾವು ಅವಧಿ ಹಾಗೂ ಪಾವತಿ ವ್ಯವಸ್ಥೆಯಲ್ಲಿ ಸಂಪೂರ್ಣ ಪಾರದರ್ಶಕತೆ ತರಲು ರಾಜ್ಯ ಸರ್ಕಾರ ಬದ್ಧವಾಗಿದೆ ಎಂದು ಸಕ್ಕರೆ ಮತ್ತು ಜವಳಿ ಸಚಿವ ರುದ್ರಪ್ಪ ಲಮಾಣಿ ತಿಳಿಸಿದ್ದಾರೆ. ರಾಜ್ಯದ ಕಬ್ಬು ಬೆಳೆಯುವ ಪ್ರದೇಶಗಳ ಕಟಾವು ಅವಧಿ ಹಾಗೂ ಸಕ್ಕರೆ ರಿಕವರಿ ಕುರಿತು ವೈಜ್ಞಾನಿಕ ಅಧ್ಯಯನ ನಡೆಸಿ ಕೇಂದ್ರ ಸರ್ಕಾರ ರಚಿಸಲಿರುವ ಜಂಟಿ ಸಮಿತಿಗೆ ರಾಜ್ಯದ ಸಮಗ್ರ ವರದಿ ಸಲ್ಲಿಸಲಾಗುವುದು ಎಂದು ಸ್ಪಷ್ಟಪಡಿಸಿದ್ದಾರೆ. ಸಕ್ಕರೆ ಕಾರ್ಖಾನೆಗಳಲ್ಲಿ ಕಬ್ಬಿನ ತೂಕದಲ್ಲಿ ವ್ಯತ್ಯಾಸವಾಗುತ್ತಿದೆ ಎಂಬ ರೈತರ ಆರೋಪಗಳನ್ನು ಸರ್ಕಾರ ಗಂಭೀರವಾಗಿ ಪರಿಗಣಿಸಿದೆ ಎಂದು ತಿಳಿಸಿದ್ದಾರೆ.

*********

ರಾಜ್ಯದ ೨೦೨ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಪ್ರಗತಿಪಥ ಯೋಜನೆಯಡಿಯಲ್ಲಿ ೫ ಸಾವಿರದ ೪೦೦ ಕಿಲೋಮೀಟರ್ ಗ್ರಾಮೀಣ ರಸ್ತೆ ಅಭಿವೃದ್ಧಿ ಮಾಡಲಾಗುತ್ತಿದ್ದು, ಮೊದಲ ಹಂತದಲ್ಲಿ ೨ ಸಾವಿರದ ೨೪೮ ಕಿಲೋಮಿಟರ್ ಕಾಮಗಾರಿ ಕೈಗೊಳ್ಳಲು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಈಶ್ವರ ಬಿ ಖಂಡ್ರೆ ಸೂಚಿಸಿದ್ದಾರೆ.  ಬೆಂಗಳೂರಿನಲ್ಲಿಂದು ಕರ್ನಾಟಕ ಗ್ರಾಮೀಣ ರಸ್ತೆ ಅಭಿವೃದ್ಧಿ ಸಂಸ್ಥೆಯ ಅಧಿಕಾರಿಗಳೊಂದಿಗೆ ಸಭೆ ನಡೆಸಿದ ಅವರು, ೧ ಸಾವಿರದ ೬೯೨ ಕೋಟಿ ರೂಪಾಯಿ ಅಂದಾಜು ವೆಚ್ಚದಲ್ಲಿ ಮೊದಲ ಹಂತದಲ್ಲಿ ಆಯ್ಕೆ ಮಾಡಿಕೊಳ್ಳಲಾಗಿರುವ ೫೬೨ ರಸ್ತೆಗಳ ಕಾಮಗಾರಿಯಲ್ಲಿ ಗುಣಮಟ್ಟದ ಖಾತ್ರಿಗೆ ಎಲ್ಲ ಅಗತ್ಯ ಕ್ರಮ ಕೈಗೊಳ್ಳುವಂತೆ ನಿರ್ದೇಶನ ನೀಡಿದ್ದಾರೆ. ಏಷ್ಯಾ ಅಭಿವೃದ್ಧಿ ಬ್ಯಾಂಕ್ ನೆರವಿನ ಈ ಯೋಜನೆಯಲ್ಲಿ ಶೇಕಡಾ ೭೦ರಷ್ಟು ಆರ್ಥಿಕ ನೆರವು ಒದಗಿಸುತ್ತಿದ್ದು, ರಾಜ್ಯ ಸರ್ಕಾರ ಶೇಕಡಾ ೩೦ರಷ್ಟು ಭರಿಸುತ್ತಿದೆ.

*********

ಪ್ರಕೃತಿ ವಿಕೋಪವನ್ನು ಸಂಪೂರ್ಣವಾಗಿ ತಡೆಯಲು ಸಾಧ್ಯವಿಲ್ಲ. ಆದರೆ ಅವುಗಳಿಂದ ಉಂಟಾಗುವ ನಷ್ಟಗಳನ್ನು ಕಡಿಮೆ ಮಾಡಬಹುದು ಎಂದು ಉಪ ಮುಖ್ಯಮಂತ್ರಿ ಡಾ.ಜಿ.ಪರಮೇಶ್ವರ್ ತಿಳಿಸಿದ್ದಾರೆ. ವಿಕಾಸಸೌಧದಲ್ಲಿ ಆಯೋಜಿಸಿದ್ದ ‘ವಿಪತ್ತಿನಿಂದ ಉಂಟಾಗಬಹುದಾದ ಅಪಾಯ ತಗ್ಗಿಸುವ ರಾಜ್ಯ ವೇದಿಕೆಯ ಮೊದಲ ಸಭೆ ಉದ್ಘಾಟಿಸಿ ಮಾತನಾಡಿದ ಅವರು, ೨೦೩೦ರ ವೇಳೆಗೆ ವಿಪತ್ತು ನಿರ್ವಹಣೆಯಲ್ಲಿ ರಾಜ್ಯವನ್ನು ದೇಶಕ್ಕೆ ಮಾದರಿ ರಾಜ್ಯವನ್ನಾಗಿಸುವುದು ಮುಂದಿನ ಗುರಿ ಹೇಳಿದ್ದಾರೆ. ರಾಜ್ಯದ ಅಭಿವೃದ್ಧಿಯನ್ನು ಕೇವಲ ಆರ್ಥಿಕ ಪ್ರಗತಿ, ಬಂಡವಾಳ ಹೂಡಿಕೆ ಮತ್ತು ಮೂಲಸೌಕರ್ಯ ನಿರ್ಮಾಣದಿಂದ ಅಳೆಯಬಾರದು. ಜನರ ಸುರಕ್ಷತೆ ಮತ್ತು ಜೀವನೋಪಾಯದ ರಕ್ಷಣೆಯೂ ಅಭಿವೃದ್ಧಿಯ ಪ್ರಮುಖ ಮಾನದಂಡವಾಗಬೇಕು ಎಂದು ಅಭಿಪ್ರಾಯಪಟ್ಟಿದ್ದಾರೆ. ವಿಪತ್ತು

ಮುನ್ನೆಚ್ಚರಿಕೆ ವ್ಯವಸ್ಥೆಯನ್ನು ಬಲಪಡಿಸಲು ಕೃತಕ ಬುದ್ಧಿಮತ್ತೆ, ಉಪಗ್ರಹ ಚಿತ್ರಣ, ಭೌಗೋಳಿಕ ಮಾಹಿತಿ ಮತ್ತು ವೈಜ್ಞಾನಿಕ ಮುನ್ಸೂಚನೆಗಳನ್ನು ಪರಿಣಾಮಕಾರಿಯಾಗಿ ಬಳಸಿಕೊಳ್ಳಬೇಕು ಎಂದು ಸಲಹೆ ನೀಡಿದ್ದಾರೆ.

*********

ದಿವ್ಯಾಂಗರು ಹಾಗೂ ಹಿಂದುಳಿದ ವರ್ಗಗಳ ಸಬಲೀಕರಣಕ್ಕೆ ಕೇಂದ್ರ ಸರ್ಕಾರ ಬದ್ಧ ಎಂದು ಕೇಂದ್ರ ಸಾಮಾಜಿಕ ನ್ಯಾಯ ಮತ್ತು ಸಬಲೀಕರಣ ಖಾತೆ ರಾಜ್ಯ ಸಚಿವ ರಾಮ್‌ದಾಸ್ ಅಠಾವಳೆ ತಿಳಿಸಿದ್ದಾರೆ. ಮೈಸೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕೇಂದ್ರ ಸರ್ಕಾರದ ವಿವಿಧ ಅಭಿವೃದ್ಧಿ ನಿಗಮಗಳ ಮೂಲಕ ೧.೫ ಲಕ್ಷದಿಂದ ೩೫ ಲಕ್ಷದ ವರೆಗೆ ಅತಿ ಕಡಿಮೆ ಬಡ್ಡಿದರದಲ್ಲಿ ಸಾಲ ಸೌಲಭ್ಯಗಳನ್ನು ಒದಗಿಸಲಾಗುತ್ತಿದೆ ಎಂದು ಹೇಳಿದ್ದಾರೆ. ಒಕ್ಕೂಟ ವ್ಯವಸ್ಥೆ ಮತ್ತು ಸಂವಿಧಾನದ ಆಶಯಗಳಿಗೆ ಅನುಗುಣವಾಗಿ ಪರಿಶಿಷ್ಟ ಜಾತಿಗೆ ಶೇಕಡಾ ೧೫ ಹಾಗೂ ಪರಿಶಿಷ್ಟ ಪಂಗಡಗಳಿಗೆ ಶೇಕಡಾ ೭.೫ ರಷ್ಟು ಮೀಸಲಾತಿ ಕಲ್ಪಿಸಲಾಗಿದೆ ಎಂದು ಸ್ಪಷ್ಟಪಡಿಸಿದ್ದಾರೆ.

*********

ನಾಡಹಬ್ಬ ಮೈಸೂರು ದಸರಾ ಮಹೋತ್ಸವದ ಅಂಗವಾಗಿ ಏರ್ಪಡಿಸಲಾಗಿದ್ದ 'ಮಹಿಳಾ ದಸರಾ' ಕಾರ್ಯಕ್ರಮವನ್ನು ಇಂದು ನಗರಾಭಿವೃದ್ಧಿ ಸಚಿವ ಡಾ.ಯತೀಂದ್ರ ಸಿದ್ದರಾಮಯ್ಯ ಉದ್ಘಾಟಿಸಿದರು. ಈ ವೇಳೆ ಮಾತನಾಡಿದ ಅವರು, ಲಿಂಗತಾರತಮ್ಯವನ್ನು ತೊರೆದು ಮಹಿಳೆಯರನ್ನು ಸಮಾಜದ ಮುಖ್ಯವಾಹಿನಿಗೆ ತರುವುದು ನಮ್ಮೆಲ್ಲರ ಆದ್ಯ ಕರ್ತವ್ಯ ಹಾಗೂ ಜವಾಬ್ದಾರಿಯಾಗಿದೆ ಎಂದು ತಿಳಿಸಿದರು. ಇದೇ ವೇಳೆ ಮಹಿಳೆಯರು ನಿರ್ಮಿಸಿರುವ ವಸ್ತುಗಳ ಪ್ರದರ್ಶನ ಹಾಗೂ ಮಾರಾಟ ಮಳಿಗೆಗಳನ್ನು ಸಚಿವರು ಉದ್ಘಾಟಿಸಿದರು. ಇನ್ನೊಂದೆಡೆ ಚಾಮುಂಡಿ ವಿಹಾರ ಜಿಲ್ಲಾ ಕ್ರೀಡಾಂಗಣಕ್ಕೆ ಭೇಟಿ ನೀಡಿದ ಕೊಪ್ಪಳ ಗವಿಮಠದ ಗವಿಸಿದ್ದೇಶ್ವರ ಮಹಾಸ್ವಾಮಿಗಳು ವಾಲಿಬಾಲ್ ಪಂದ್ಯಾವಳಿ ವೀಕ್ಷಿಸಿದರು, ಅಥ್ಲೆಟಿಕ್ ಸಿಂಥೆಟಿಕ್ ಅಂಕಣಕ್ಕೆ ಆಗಮಿಸಿ ಮಹಿಳೆಯರ ಹಾಗೂ ಪುರುಷರ ೪೦೦ ಇಂಟು ೪ ರಿಲೇ ವೀಕ್ಷಿಸಿ ಬಹುಮಾನ ವಿತರಿಸಿದರು. ನಂತರ ಜಿಲ್ಲಾ ಕ್ರೀಡಾಂಗಣದ ಆವರಣದಲ್ಲಿರುವ ಕುಸ್ತಿ ಮನೆಗೆ ಆಗಮಿಸಿ ಮಕ್ಕಳ ಕುಸ್ತಿಯನ್ನು ಕಂಡು ಸಂತಸ ವ್ಯಕ್ತಪಡಿಸಿದರು. ಕುವೆಂಪು ಕನ್ನಡ ಅಧ್ಯಯನ ಸಂಸ್ಥೆಯ ಬಿ.ಎಂ.ಶ್ರೀ ಸಭಾಂಗಣದಲ್ಲಿ ದಸರಾ ಕವಿಗೋಷ್ಠಿ ಉಪಸಮಿತಿ ವತಿಯಿಂದ ಆಯೋಜಿಸಿದ ಬಹುರೂಪಿ ಕವಿಗೋಷ್ಠಿಯನ್ನು ಖಾತ ಸಾಹಿತಿ ವೈದೇಹಿ ಉದ್ಘಾಟಿಸಿದರು.

*********

’ಜನ ಸೇವೆಯಿಂದ ದೇಶ ಸೇವೆ’ ಎಂಬ ಮಂತ್ರದಡಿ ಜನರ ಏಳಿಗೆಯ ಅಚಲ ಬದ್ಧತೆಯೊಂದಿಗೆ, ಸಾರ್ವಜನಿಕ ಸೇವೆಯ ೨೫ ವರ್ಷಗಳ ಪಯಣವನ್ನು ಪ್ರಧಾನಿ ನರೇಂದ್ರ ಮೋದಿ ಪೂರೈಸಿದ್ದಾರೆ. ಅದರ ಭಾಗವಾಗಿ, ಹಲವು ವಲಯಗಳಲ್ಲಿ ಕೈಗೊಂಡ ಮಹತ್ವದ ಸುಧಾರಣೆಗಳ ಕುರಿತ ಸರಣಿಯನ್ನು ಆಕಾಶವಾಣಿ ಪ್ರಸಾರ ಮಾಡುತ್ತಿದೆ. ಇಂದಿನ ಆವೃತ್ತಿಯಲ್ಲಿ ಸಾಗರಮಾಲಾ ಯೋಜನೆ ಕುರಿತ ಒಂದು ವರದಿ. ೨೦೧೫ರಲ್ಲಿ ಪ್ರಾರಂಭವಾದ ’ಸಾಗರಮಾಲಾ’ ಯೋಜನೆಯು ದೇಶದ ಕರಾವಳಿಯನ್ನು ಉತ್ಪಾದನೆ, ಮಾರುಕಟ್ಟೆ ಹಾಗೂ ಜನಜೀವನದೊಂದಿಗೆ ಬೆಸೆಯುವ ಮೂಲಕ ಆರ್ಥಿಕ ಪ್ರಗತಿಯ ಪ್ರಮುಖ ಚಾಲಕಶಕ್ತಿಯಾಗಿ ಪರಿವರ್ತಿಸುವ ಗುರಿ ಹೊಂದಿದೆ. ಬಂದರು ಆಧುನಿಕರಣ, ರಸ್ತೆ ಮತ್ತು ರೈಲು ಸಂಪರ್ಕ, ಬಂದರು ಆಧಾರಿತ ಕೈಗಾರೀಕರಣ, ಕರಾವಳಿ ಸಮುದಾಯಗಳ ಅಭಿವೃದ್ಧಿ ಹಾಗೂ ಒಳನಾಡಿನ ಜಲಸಾಗಾಣಿಕೆಯಂತಹ ಐದು ಪ್ರಮುಖ ಸ್ತಂಭಗಳ ಮೇಲೆ ಈ ಯೋಜನೆ ಕಾರ್ಯನಿರ್ವಹಿಸುತ್ತಿದೆ. ಈ ಮಹತ್ವಾಕಾಂಕ್ಷೆಯ ಯೋಜನೆಯಡಿ ಒಟ್ಟು ೬.೦೬ ಲಕ್ಷ ಕೋಟಿ ರೂಪಾಯಿಗೂ ಅಧಿಕ ಮೌಲ್ಯದ ೮೪೫ಕ್ಕೂ ಹೆಚ್ಚು ಯೋಜನೆಗಳನ್ನು ಗುರುತಿಸಲಾಗಿದ್ದು, ಈಗಾಗಲೇ ೩೧೫ ಯೋಜನೆಗಳು ಪೂರ್ಣಗೊಂಡಿವೆ. ಈ ಯೋಜನೆಯಿಂದ ೨೦೧೪ರಲ್ಲಿ ೮೭೩ ದಶಲಕ್ಷ ಟನ್‌ಗಳಷ್ಟಿದ್ದ ಪ್ರಮುಖ ಬಂದರುಗಳ ಸಾಮರ್ಥ್ಯ ೨೦೨೬ಕ್ಕೆ ೧ ಸಾವಿರದ ೭೨೮ ದಶಲಕ್ಷ ಟನ್‌ಗಳಿಗೆ ದ್ವಿಗುಣಗೊಂಡಿದೆ.

*********

ನವದೆಹಲಿಯಲ್ಲಿ ಇದೇ ೨೭ ರಿಂದ ೨೯ರವರೆಗೆ ನಡೆಯಲಿರುವ ಉದಯೋನ್ಮುಖ ವಿಜ್ಞಾನ, ತಂತ್ರಜ್ಞಾನ ಮತ್ತು ನಾವೀನ್ಯತೆ ಸಮ್ಮೇಳನ-೨೦೨೬ರ ಪೂರ್ವಭಾವಿಯಾಗಿ ಬೆಂಗಳೂರಿನಲ್ಲಿಂದು ಕಾರ್ಯಕ್ರಮ ಆಯೋಜಿಸಲಾಗಿತ್ತು. ಈ ಬಾರಿ ’ಸೆಮಿಕಂಡಕ್ಟರ್‌ಗಳು ಮತ್ತು ಮುಂದಿನ ಪೀಳಿಗೆಯ ಚಿಪ್‌ಗಳು’ ವಿಷಯದ ಕುರಿತು ಗೋಷ್ಠಿಯನ್ನು ಆಯೋಜಿಸುವ ಜವಾಬ್ದಾರಿಯನ್ನು ಡಿಆರ್‌ಡಿಒ ಗೆ ನೀಡಲಾಗಿದೆ. ಈ ಹಿನ್ನೆಲೆಯಲ್ಲಿ ರಕ್ಷಣಾ ಇಲಾಖೆ ಮಹಾ ನಿರ್ದೇಶಕ ಡಾ.ಬಿ.ಕೆ.ದಾಸ್ ಮಾತನಾಡಿ, ಮುಂದಿನ ಪೀಳಿಗೆಗಾಗಿ ದೇಶೀಯ ಸಾಮರ್ಥ್ಯಗಳ ಮೇಲೆ ಒತ್ತು ನೀಡುವ ಮೂಲಕ ದೇಶೀಯ ಸೆಮಿಕಂಡಕ್ಟರ್, ಪರಿಸರ ವ್ಯವಸ್ಥೆಯ ಅಬಿವೃದ್ಧಿಗೆ ಕೊಡುಗೆ ನೀಡಲಿದೆ ಎಂದು ತಿಳಿಸಿದ್ದಾರೆ.

*********

ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳಿಗೆ ಮೀಸಲಾತಿ ಹೆಚ್ಚಳದ ನಿರ್ಧಾರವನ್ನು ರದ್ದುಗೊಳಿಸಿದ ಉಚ್ಚನ್ಯಾಯಾಲಯದ ತೀರ್ಪು ಹಲವು ತಲೆಮಾರುಗಳಿಂದ ಸಮಾನ ಅವಕಾಶ ವಂಚಿತವಾಗಿದ್ದ ಶೋಷಿತ ಸಮುದಾಯಗಳ ಬದುಕಿನ ಕನಸಿಗೆ ಘಾಸಿ ಉಂಟುಮಾಡಿದೆ ಎಂದು ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅಭಿಪ್ರಾಯಪಟ್ಟಿದ್ದಾರೆ. ಈ ಕುರಿತಂತೆ ಮಾಧ್ಯಮ ಹೇಳಿಕೆ ಬಿಡುಗಡೆ ಮಾಡಿರುವ ಅವರು, ಸುಪ್ರೀಂಕೋರ್ಟ್ ತೀರ್ಪಿನ ಅರಿವಿದ್ದರೂ ಈ ಹಿಂದಿನ ಬಿಜೆಪಿ ಸರ್ಕಾರ, ೨೦೨೩ರ ವಿಧಾನಸಭಾ ಚುನಾವಣೆಗೂ ಮುನ್ನ ಮೀಸಲಾತಿ ಹೆಚ್ಚಿಸಿದ್ದು, ಈಗಿನ ಅವಾಂತರಕ್ಕೆ ಕಾರಣ ಎಂದು ತಿಳಿಸಿದ್ದಾರೆ. ಕೇಂದ್ರ ಸರ್ಕಾರ ಶೇಕಡಾ ೫೦ರ ಮೀಸಲಾತಿ ಮಿತಿಗೆ ಜೋತುಬೀಳದೆ ಜನಸಂಖ್ಯೆಗೆ ಅನುಗುಣವಾಗಿ ಮೀಸಲಾತಿ ಹೆಚ್ಚಿಸುವಂತೆ ಒತ್ತಾಯಿಸಿದ್ದಾರೆ.

*********

ಭಾರತೀಯ ಬಾಹ್ಯಾಕಾಶ ಸಂಶೋಧನಾ ಸಂಸ್ಥೆ-ಇಸ್ರೋ ಆಯೋಜಿಸಿದ್ದ ರಾಷ್ಟ್ರೀಯ ಮಟ್ಟದ 'ಇಸ್ರೋ ರೋಬೋಟಿಕ್ಸ್ ಚಾಲೆಂಜ್ - ಯುಆರ್ಎಸ್‌ಸಿ ೨೦೨೪' ಸ್ಪರ್ಧೆಯಲ್ಲಿ ಧಾರವಾಡದ ಭಾರತೀಯ ಮಾಹಿತಿ ತಂತ್ರಜ್ಞಾನ ಸಂಸ್ಥೆಯ 'ಟೀಮ್ ಐಕಾರಸ್' ನಾಲ್ಕನೇ ಸ್ಥಾನ ಪಡೆದಿದೆ. ಸಂಸ್ಥೆಯ ಏಳು ವಿದ್ಯಾರ್ಥಿಗಳನ್ನೊಳಗೊಂಡ ಈ ತಂಡಕ್ಕೆ ೨ ಲಕ್ಷ ನಗದು ಬಹುಮಾನ ಲಭಿಸಿದೆ. ಜಿಪಿಎಸ್ ಸೌಲಭ್ಯವಿಲ್ಲದ ಹಾಗೂ ಮಂಗಳ ಗ್ರಹದ ವಾತಾವರಣವನ್ನು ಹೋಲುವ ಪರಿಸರದಲ್ಲಿ ಯಾವುದೇ ಮಾನವ ಹಸ್ತಕ್ಷೇಪವಿಲ್ಲದೆ ಸ್ವಯಂಚಾಲಿತವಾಗಿ ಕಾರ್ಯನಿರ್ವಹಿಸಬಲ್ಲ 'ಕ್ವಾಡ್‌ಕಾಪ್ಟರ್ ಡ್ರೋನ್' ಅನ್ನು ವಿದ್ಯಾರ್ಥಿಗಳು ಅಭಿವೃದ್ಧಿಪಡಿಸಿದ್ದಾರೆ.

*****END****